# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1001(1317)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಕಾರ್ಮಿಕ ಸಚಿವರು

ವಿಷಯ : ಅಸಂಘಟಿತ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರ ಕೈಗೊಂಡ ಯೋಜನೆಗಳ ಬಗ್ಗೆ

(ಅ) ಅಸಂಘಟಿತ ಕಾರ್ಮಿಕರ ಏಳಿಗೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಯಾವ ಯಾವ ಯೋಜನೆಗಳನ್ನು ರೂಪಿಸಿದೆ; ಅಸಂಘಟಿತ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು; ಈ ಅನುದಾನದಲ್ಲಿ ವೆಚ್ಚ ಮಾಡಿರುವ ಅನುದಾನವೆಷ್ಟು; (ಮಾಹಿತಿ ನೀಡುವುದು)

(ಆ) ಅಸಂಘಟಿತ ಕಾರ್ಮಿಕರಿಗೆ ವೈದ್ಯಕೀಯ ಸೇವೆಗಳನ್ನು ಒದಗಿಸಲು ಸರ್ಕಾರ ವೆಚ್ಚ ಮಾಡಿರುವ ಅನುದಾನವೆಷ್ಟು; ಅಸಂಘಟಿತ ಕಾರ್ಮಿಕರ ಮಕ್ಕಳ ಕಲ್ಯಾಣಕ್ಕಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಇ) ಇದುವರೆಗೂ ಸರ್ಕಾರದಿಂದ ಎಷ್ಟು ಅಸಂಘಟಿತ ಕಾರ್ಮಿಕರು ವಿವಿಧ ಯೋಜನೆಗಳಡಿ ಸೌಲಭ್ಯಗಳನ್ನು ಪಡೆದುಕೊಂಡಿರುತ್ತಾರೆ;

(ಈ) ಅಸಂಘಟಿತ ಕಾರ್ಮಿಕರು ಕಟ್ಟಡ ಮತ್ತು ಬಾಯ್ಲರ್ ಕಾರ್ಖಾನೆಗಳಲ್ಲಿ ಕೆಲಸ ಮಾಡುವ ಸಮಯದಲ್ಲಿ ತೊಂದರೆಗೀಡಾಗಿ, ಅಂಗವೈಕಲ್ಯತೆ ಹೊಂದಿರುವ ಕಾರ್ಮಿಕರ ಜೀವನೋಪಾಯಕ್ಕೆ ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ?